# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 508 (595)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ: ಚಂದ್ರಶೇಖರ್ ಬಿ. ಪಾಟೀಲ್(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕರ್ನಾಟಕ ಲೋಕ ಸೇವಾ ಆಯೋಗದ ಕಾರ್ಯವೈಖರಿಯ ಕುರಿತು

(ಅ) ಕರ್ನಾಟಕ ಲೋಕ ಸೇವಾ ಆಯೋಗದ ಭ್ರಷ್ಟ ಮತ್ತು ಜನ ವಿರೋಧಿ ಕಾರ್ಯವೈಖರಿಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ರಾಜ್ಯದ ವಿವಿಧ ಜಿಲ್ಲೆಗಳಿಂದ ವಿವಿಧ ಸಮಸ್ಯೆಗಳನ್ನು ಹೊತ್ತು ಕರ್ನಾಟಕ ಲೋಕ ಸೇವಾ ಆಯೋಗ ಕಾರ್ಯಾಲಯಕ್ಕೆ ಬರುವ ಅಭ್ಯರ್ಥಿಗಳಿಗೆ/ಪದವೀಧರರಿಗೆ ಸ್ಪಂದಿಸಲು ಯಾವುದೇ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಇ) ಸಾರ್ವಜನಿಕ ಕುಂದುಕೊರತೆಗಳನ್ನು ಬಗೆಹರಿಸಲು ಕರ್ನಾಟಕ ಲೋಕ ಸೇವಾ ಆಯೋಗ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಿದೆಯೇ; ನಿರ್ಬಂಧಿಸಿದ್ದಲ್ಲಿ ಅದಕ್ಕೆ ಕಾರಣವೇನು;

(ಉ) ಕರ್ನಾಟಕ ಲೋಕ ಸೇವಾ ಆಯೋಗ ಕಛೇರಿ ಒಳಗಡೆ ಬಿಡದಿರಲು ಕಾರಣವಾದ ಸಮಸ್ಯೆಗಳಿಗೆ ಸಮಾದಾನ ಕಂಡುಕೊಳ್ಳುವ ವ್ಯವಸ್ಥೆ /ವಿಧಾನವೇನು; (ವಿವರ ನೀಡುವುದು)

(ಊ) ಕಳೆದ ಎರಡು ವರ್ಷಗಳಲ್ಲಿ ಕರ್ನಾಟಕ ಲೋಕ ಸೇವಾ ಆಯೋಗ ಕಛೇರಿಗೆ ಭೇಟಿ ನೀಡಿದ ಬಗ್ಗೆ Visitor’s Dairy ಇಡಲಾಗಿದೆಯೇ; ಇಟ್ಟಿದ್ದಲ್ಲಿ ಸದರಿ ಡೈರಿಯ ದೃಢೀಕರಣ ನಕಲು ಪ್ರತಿ ನೀಡುವುದು?